ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉನಿ : ಸುಮಪ : 2018–19 : ದಿನಾಂಕ : 09–10–2018

# ಪತ್ರಿಕಾ ಆಮಂತ್ರಣ

1. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ:

ವಿಶೇಷ ಆಹ್ವಾನಿತರು:
ಡಾ. ಜಿ.ಪರಮೇಶ್ವರ, ಉಪಮುಖ್ಯಮಂತ್ರಿಗಳು

ಮುಖ್ಯ ಅತಿಥಿಗಳು:
ಡಿ.ವಿ. ಸದಾನಂದಗೌಸ, ಸಾಂಖ್ಯಿಕ ಮತ್ತು ಯೋಜನೆ ಅನುಷ್ಠಾನ ಸಚಿವರು.

ಉದ್ಘಾಟಕರು:
ಕೆ.ಜೆ. ಜಾರ್ಜ್, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಕ್ಕರೆ ಸಚಿವರು.

ಅಧ್ಯಕ್ಷತೆ:
ಎಸ್.ಆರ್. ವಿಶ್ವನಾಥ್, ವಿಧಾನಸಭಾ ಸದಸ್ಯರು, ಯಲಹಂಕ ಕ್ಷೇತ್ರ, ಬೆಂಗಳೂರು

ದಿನಾಂಕ: 10–10–2018, ಬುಧವಾರ, ಸಮಯ : ಬೆಳಗ್ಗೆ 11.00 ಗಂಟೆಗೆ.
ಸ್ಥಳ: ತೋಟಗಾರಿಕೆ ವಿಜ್ಞಾನಗಳ ಕಾಲೇಜು ಆವರಣ, ಜಿ.ಕೆ.ವಿ.ಕೆ. ಮೇ. ಸಂದೀಪ್ ಉನ್ನಿಕೃಷ್ಣನ್ ರಸ್ತೆ, ದೊಡ್ಡ ಬೆಟ್ಟಹಳ್ಳಿ ಬಡಾವಣೆ, ವಿದ್ಯಾರಣ್ಯಪುರ ಪೋಸ್ಟ್, ಬೆಂಗಳೂರು – 560 097.

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1112/1222**

## ಉಪ ರಾಷ್ಟ್ರಪತಿ ನಗರಕ್ಕೆ ಆಗಮನ

ಬೆಂಗಳೂರು, ಅಕ್ಟೋಬರ್ 9, (ಕರ್ನಾಟಕ ವಾರ್ತೆ)

ಭಾರತದ ಉಪರಾಷ್ಟ್ರಪತಿ ವೆಂಕಯ್ಯನಾಯ್ಡು ಅವರು ಇಂದು ಬೆಳಿಗ್ಗೆ ಸುಮಾರು 9.30 ಗಂಟೆಗೆ ವಿಮಾನದ ಮೂಲಕ ಬೆಂಗಳೂರು ಹೆಚ್.ಎ.ಎಲ್. ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

ಅವರನ್ನು ರಾಜ್ಯಪಾಲ ವಜುಭಾಯಿ ವಾಲ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣಬೈರೇಗೌಡ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಗಂಗಾಂಬಿಕಾ, ಮುಖ್ಯ ಕಾರ್ಯದರ್ಶಿ ವಿಜಯ ಭಾಸ್ಕರ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಟಿ. ಸುನೀಲ್ ಕುಮಾರ್ ಸೇರಿದಂತೆ ಇತರರು ಬರಮಾಡಿಕೊಂಡರು.

ನಂತರ ಉಪ ರಾಷ್ಟ್ರಪತಿಗಳು ಭಾರತ್ ಸ್ಕೌಟ್ಸ್ – ಗೈಡ್ಸ್ ಕರ್ನಾಟಕ ಇವರು ಆಯೋಜಿಸಿದ್ದ ವಿ.ಪಿ. ದೀನದಯಾಳು ನಾಯ್ಡು ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದರು. ನಂತರ ರಾಜ್ಯಪಾಲರು ಸೇರಿದಂತೆ ಹಲವು ಗಣ್ಯರು ಉಪರಾಷ್ಟ್ರಪತಿಗಳನ್ನು ಎಚ್.ಎಲ್. ಎಲ್. ವಿಮಾನ ನಿಲ್ದಾಣದಲ್ಲಿ ಬೀಳ್ಕೊಟ್ಟರು.

**ಸಂಖ್ಯೆ:1113/1223**

## ಮಕ್ಕಳಲ್ಲಿ ಶಿಸ್ತು ಮೂಡಿಸುವಲ್ಲಿ ಸ್ಕೌಟ್ಸ್ – ಗೈಡ್ಸ್ ಪಾತ್ರ ಅಪಾರ

**ಉಪರಾಷ್ಟ್ರಪತಿ – ವೆಂಕಯ್ಯನಾಯ್ಡು**

ಬೆಂಗಳೂರು, ಅಕ್ಟೋಬರ್ 9, (ಕರ್ನಾಟಕ ವಾರ್ತೆ)

ಪ್ರಸ್ತುತ ಜೀವನ ಶೈಲಿಯಲ್ಲಿ ಆರೋಗ್ಯವಂತ ಸಮಾಜವನ್ನು ಕಟ್ಟುವ ನಿಟ್ಟಿನಲ್ಲಿ ಮಕ್ಕಳು ಹಾಗೂ ಯುವಕರಲ್ಲಿ ಶಿಸ್ತನ್ನು ಮೂಡಿಸುವಂತಹ ಸ್ಕೌಟ್ಸ್ – ಗೈಡ್ಸ್, ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. ಸೇರುವುದನ್ನು ಕಡ್ಡಾಯ ಮಾಡಿ ಪದವಿ ನೀಡುವಂತಹ ವ್ಯವಸ್ಥೆ ಶಿಕ್ಷಣ ಕ್ಷೇತ್ರದಲ್ಲಿ ಜಾರಿಯಾಗಬೇಕು ಎಂದು ಉಪ ರಾಷ್ಟ್ರಪತಿ ವೆಂಕಯ್ಯನಾಯ್ಡು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಇಂದು ನಗರದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಭಾರತ್ ಸ್ಕೌಟ್ಸ್ – ಗೈಡ್ಸ್ ಕರ್ನಾಟಕ, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಜಂಟಿಯಾಗಿ ಹಮ್ಮಿಕೊಂಡಿದ್ದ ವಿ.ಪಿ. ದೀನದಯಾಳು ನಾಯ್ಡು ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು ಪ್ರಸ್ತುತ ಜೀವನ ಶೈಲಿ ಹಾಗೂ ಹಾಳಾಗುತ್ತಿರುವ ಪರಿಸರ ಜಾಗತಿಕ ಸಮಸ್ಯೆಯಾಗಿದ್ದು ಮಕ್ಕಳಲ್ಲಿ ಹಾಗೂ ಯುವಕರಲ್ಲಿ ಶಿಸ್ತನ್ನು ಮೂಡಿಸುವ ಜೊತೆಯಲ್ಲಿ ಪರಿಸರದ ಬಗ್ಗೆ ಅರಿವನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಹೇಳಿದರು.

ಪಠ್ಯೇತರ ಚಟುವಟಿಕೆಯಾಗಿರುವ ಸ್ಕೌಟ್ಸ್– ಗೈಡ್ಸ್. ಎನ್.ಎಸ್.ಎಸ್. ನಂತಹ ಚಟುವಟಿಕೆಗಳು ಶಿಕ್ಷಣದ ಕಡ್ಡಾಯ ಭಾಗವಾಗಬೇಕು. ಜಾಗತಿಕ ಸಮಸ್ಯೆಗಳಾಗಿರುವ ಅಂತರ್ಜಲ, ಪರಿಸರ ನಾಶ, ಬದಲಾಗುತ್ತಿರುವ ಹವಾಮಾನದಂತಹ ಜಾಗತಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ತುರ್ತು ಕ್ರಮಕೈಗೊಳ್ಳಬೇಕಾದ ಅಗತ್ಯವಿದೆ.

ಸರ್ಕಾರಗಳು ಹಮ್ಮಿಕೊಳ್ಳುವ ಪ್ರತಿಯೊಂದು ಅಭಿವೃದ್ಧಿ ಯೋಜನೆಗಳಲ್ಲಿ ಜನಸಾಮಾನ್ಯರು ಜವಾಬ್ದಾರಿಯಿಂದ ಪಾಲ್ಗೊಂಡಲ್ಲಿ ಮಾತ್ರ ಸರ್ಕಾರಿ ಯೋಜನೆಗಳು ಯಶಸ್ಸು ಕಾಣಲು ಸಾಧ್ಯ. ವಿವಿಧತೆಯಲ್ಲಿ ಏಕತೆಯನ್ನು ಕಾಣುವ ದೇಶ ನಮ್ಮದು, ಪ್ರತಿಯೊಬ್ಬರಲ್ಲಿ ನಮ್ಮ ದೇಶದ ಬಗ್ಗೆ ಗೌರವವನ್ನು ಕಾಣುತ್ತೇವೆ. ದೇಶದ ಅಭಿವೃದ್ಧಿಗಾಗಿ ಪ್ರತಿಯೊಬ್ಬರು ತಮ್ಮ ಕೈಲಾದ ಮಟ್ಟಿಗೆ ಸಹಕರಿಸಬೇಕು ಎಂದು ಹೇಳಿದರು.

ಗೌರವಾನ್ವಿತ ಅತಿಥಿಗಳಾಗಿ ಮಾತನಾಡಿದ ರಾಜ್ಯಪಾಲ ವಾಜುಬಾಯಿ ವಾಲಾ ಅವರು ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಪ್ರೇರಣೆಯನ್ನು ತುಂಬುತ್ತವೆ. ದೇಶಕ್ಕಾಗಿ ತಮ್ಮ ಜೀವನವನ್ನು ಮುದುಪಗಿಟ್ಟ ದೀನದಯಾಳು ನಾಯ್ಡು ಅವರು ಮಕ್ಕಳಿಗೆ ಮಾದರಿಯಾಗಿದ್ದಾರೆ. ಇಂತಹ ಬಹುಮುಖ ಪ್ರತಿಭೆಯ ಜೀವನವನ್ನು ಮಕ್ಕಳಿಗೆ ಮನದಟ್ಟು ಮಾಡುವ ಅವಶ್ಯಕತೆ ಇದೆ.

ದೇಶಕ್ಕಾಗಿ ಬದುಕಿದವರನ್ನು ಜನರು ನೆನಪಿಸಿಕೊಳ್ಳುವ ಮೂಲಕ ಅವರ ಮಾರ್ಗದರ್ಶನವನ್ನು ಮಕ್ಕಳಲ್ಲಿ ಪ್ರೇರೇಪಣೆ ತುಂಬುವ ಮೂಲಕ ಉತ್ತಮ ಸಮಾಜವನ್ನು

ಕಟ್ಟಲು ಪಣತೊಡಬೇಕು. ದೇಶಕ್ಕಾಗಿ ದುಡಿದವರು ಅಮರರಾಗುತ್ತಾರೆ ಎಂದು ಹೇಳಿ ದೀನದಯಾಳು ನಾಯ್ಡು ಅವರ ಸಾಧನೆಗಳನ್ನು ನೆರೆದಿದ್ದ ಸ್ಕೌಟ್ಸ್ – ಗೈಡ್ಸ್ ಮಕ್ಕಳಿಗೆ ವಿವರಿಸಿದರು.

ಮುಖ್ಯಮಂತ್ರಿಗಳ ಪರವಾಗಿ ಸಚಿವ ಬಂಡೆಪ್ಪ ಕಾಶಂಪೂರ್ ಅವರು ಮುಖ್ಯಮಂತ್ರಿಗಳ ಸಂದೇಶವನ್ನು ಓದಿದರು.

ಕಾರ್ಯಕ್ರಮದಲ್ಲಿ ಸಚಿವರುಗಳಾದ ಎನ್. ಮಹೇಶ್, ಯು.ಟಿ. ಖಾದರ್, ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ರಾಜ್ಯ ಸ್ಕೌಟ್ಸ್ – ಗೈಡ್ಸ್ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ, ಎಂ.ಎ. ಚಲ್ಲಯ್ಯ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

**ಸಂಖ್ಯೆ:1114/1224**

**ಸಂಖ್ಯೆ:1115/1225**

## ಉದ್ಯೋಗ ಸೃಜನ ಯೋಜನೆ – ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ – ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 9, (ಕರ್ನಾಟಕ ವಾರ್ತೆ)

2018–19 ನೇ ಸಾಲಿನ ಮುಖ್ಯಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಸ್ವಯಂ ಉದ್ಯೋಗ ಸ್ಥಾಪಿಸಲು ಆಸಕ್ತಿಯುಳ್ಳ ಗ್ರಾಮೀಣ ಪ್ರದೇಶದ ನಿರುದ್ಯೋಗಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿತ್ತು. ಆದರೆ ಈ ಯೋಜನೆಯಲ್ಲಿ ಹೆಚ್ಚು ಅರ್ಜಿಗಳು ಬಾರದಿರುವ ಕಾರಣ ಅರ್ಜಿಯನ್ನು ಸಲ್ಲಿಸಲು ನವೆಂಬರ್ 13 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ http://cmegp.kar.nic.in ಅಥವಾ ದೂರವಾಣಿ ಸಂಖ್ಯೆ 080-22643431/ಮೊಬೈಲ್ ಸಂಖ್ಯೆ: 94808-25611 ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕಚೇರಿ, ಬೆಂಗಳೂರು ನಗರ ಜಿಲ್ಲೆ, ನಂ 10, 1ನೇ ಮಹಡಿ, ಜಸ್ಮಾ ಭವನ ರಸ್ತೆ, ಬೆಂಗಳೂರು – 52 ಇಲ್ಲಿಗೆ ಭೇಟಿ ನೀಡಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ ಎಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

**ಸಂಖ್ಯೆ:1116/1226**

## ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 09, 2018 (ಕರ್ನಾಟಕ ವಾರ್ತೆ)**

ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್. ವಿ. ದೇಶಪಾಂಡೆ ಅವರು ಅಕ್ಟೋಬರ್ 10 ರಂದು ಧಾರವಾಡ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಕ್ಟೋಬರ್ 11 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1117/1227**

## ರೀಸರ್ಚ್ ಅಸಿಸ್ಟೆಂಟ್ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 09, 2018 (ಕರ್ನಾಟಕ ವಾರ್ತೆ)**

2019 ರ ಲೋಕಸಭಾ ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೂ ಮುಖ್ಯ ಚುನಾವಣಾಧಿಕಾರಿಗಳು ಮತ್ತು ಪದನಿಮಿತ್ತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಚುನಾವಣೆಗಳು) ರವರ ಕಚೇರಿಯಲ್ಲಿ Research Assistant - 2 Posts ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ನಿಗಧಿಪಡಿಸಿದ ಅರ್ಹತೆಯನ್ವಯ ತಾತ್ಕಾಲಿಕವಾಗಿ ಬಾಹ್ಯ ಮೂಲದಿಂದ ತುಂಬಲು ಉದ್ದೇಶಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಈ ಪ್ರಕಟಣೆ ಪ್ರಕಟಗೊಂಡ ದಿನಾಂಕದಿಂದ ಏಳು ದಿನಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು. ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಹೆಚ್ಚಿನ ವಿವರಗಳಿಗಾಗಿ www.ceokarnataka.kar.nic.in ನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.